1

# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 650 |
| ಸದಸ್ಯರ ಹೆಸರು | : | ಶ್ರೀ ಗೋವಿಂದ ರಾಜು (ವಿಧಾನಸಭಾ ಕ್ಷೇತ್ರ) |
| ಉತ್ತರಿಸುವವರು | : | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕ ಸಬಲೀಕರಣ ಸಚಿವರು. |
| ಉತ್ತರಿಸಬೇಕಾದ ದಿನಾಂಕ | : | 12.12.2025. |

******

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಳೆದ 3 ವರ್ಷದ ಅವಧಿಯಿಂದ ಇಲ್ಲಿಯವರೆಗೂ ಅಪ್ರಾಪ್ತ ಹೆಣ್ಣು ಮಕ್ಕಳ ಗರ್ಭಧಾರಣೆ ನಡೆದಿರುವ ಪ್ರಕರಣಗಳ ಸಂಖ್ಯೆಯೆಷ್ಟು; (ಜಿಲ್ಲಾವಾರು ವಿವರ): | ರಾಜ್ಯದಲ್ಲಿ ಕಳೆದ 3 ವರ್ಷದ ಅವಧಿಯಲ್ಲಿ ಅಪ್ರಾಪ್ತ ಹೆಣ್ಣು ಮಕ್ಕಳ ಗರ್ಭಧಾರಣೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಬಂದ ಪ್ರಕರಣಗಳ ಸಂಖ್ಯೆ:2320 (ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ಲಗತ್ತಿಸಿದೆ.) |
| ಆ) | ಹದಿಯರೆಯದ ಅಪ್ರಾಪ್ತೆಯರು ತಾಯ್ತನದ ಭಾರ ಹೊರುತ್ತಿರುವ ಪ್ರಕರಣಗಳು ರಾಜ್ಯದಲ್ಲಿ ಮಿತಿ ಮೀರುತ್ತಿದ್ದು, ಕಳೆದ 10 ತಿಂಗಳಲ್ಲಿ ರಾಜ್ಯದಲ್ಲಿ ಇಂತಹ ಪ್ರಕರಣಗಳು 10 ಸಾವಿರ ಗಡಿ ದಾಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ ದಾಖಲಾದ ಬಾಲಗರ್ಭಿಣಿಯ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಕಳೆದ 10 ತಿಂಗಳಲ್ಲಿ ರಾಜ್ಯದಲ್ಲಿ ದಾಖಲಾದ ಬಾಲ ಗರ್ಭಿಣಿಯರ ಪ್ರಕರಣಗಳ ಸಂಖ್ಯೆ:749 (ಜನವರಿ-2025 ರಿಂದ ಅಕ್ಟೋಬರ್-2025 ರ ಅಂತ್ಯಕ್ಕೆ) |
| ಇ) | ಇಂತಹ ಪ್ರಕರಣಗಳು ನಡೆಯಲು ಕಾರಣವೇನು ಎಂಬುದನ್ನು ಸರ್ಕಾರ ಅಧ್ಯಯನ ನಡೆಸಿದೆಯೇ; ಹಾಗಿದ್ದಲ್ಲಿ ಇದರ ಬಗ್ಗೆ ತೆಗೆದುಕೊಂಡ ಕ್ರಮವೇನು; | **ಬಾಲಗರ್ಭಿಣಿ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳು ವಿವರ.**<br>• ಬಾಲ್ಯವಿವಾಹದ ಪ್ರಯತ್ನ, ನಿಶ್ಚಿತಾರ್ಥದ ಬಗ್ಗೆ ಕ್ರಮ ಕೈಗೊಳ್ಳಲು ಬಾಲ್ಯವಿವಾಹ ನಿಷೇಧ ಕಾಯ್ದೆ-2006 ರಲ್ಲಿ ಯಾವುದೇ ಕಲಂಗಳಲ್ಲಿ ಅವಕಾಶ ಇಲ್ಲದೇ ದೂರನ್ನು ದಾಖಲಿಸಲು ಸಾಧ್ಯವಾಗುತ್ತಿಲ್ಲವಾದ್ದರಿಂದ ಇದನ್ನು ಅಪರಾಧವನ್ನಾಗಿಸಲು ಬಾಲ್ಯವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ -2025) ಅನ್ನು ಜಾರಿಗೆ ತರಲು ಕ್ರಮವಹಿಸಲಾಗುತ್ತಿದೆ.<br>• ರಾಜ್ಯದಲ್ಲಿ ಅಪ್ರಾಪ್ತ ವಯಸ್ಸಿನ ಬಾಲಕಿಯರು ಬಾಲಗರ್ಭಿಣಿಯರು ಆಗುವುದನ್ನು ತಡೆಗಟ್ಟಲು ಎಲ್ಲಾ ಭಾಗೀದಾರ ಇಲಾಖೆಗಳ ಅಧಿಕಾರಿ/ ಸಿಬ್ಬಂದಿಗಳಿಗೆ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಹಂತಗಳಲ್ಲಿ ಸಾಮರ್ಥ್ಯಾಭಿವೃದ್ಧಿ ತರಬೇತಿ ನೀಡಲು ಯೋಜಿಸಲಾಗುತ್ತಿದೆ.<br>• ಮಕ್ಕಳ ಸಹಾಯವಾಣಿ-1098 (24*7) ಕಾರ್ಯ ನಿರ್ವಹಿಸುತ್ತಿದೆ. ಸಂಕಷ್ಟದಲ್ಲಿರುವ ಮಗುವಿನ ಬಗ್ಗೆ ಯಾವುದೇ ಸಮಯದಲ್ಲಿ ಕರೆ ಸ್ವೀಕೃತವಾದರೂ ತಕ್ಷಣ ಮಗುವನ್ನು ರಕ್ಷಿಸಲು ಸಂಬಂಧಿಸಿದ ಅಧಿಕಾರಿಗಳು ಕಾರ್ಯ ಪ್ರವೃತ್ತರಾಗಿರುತ್ತಾರೆ.<br>• ದಿನಾಂಕ: 06.09.2024 ರ ಸರ್ಕಾರದ ಆದೇಶದಂತೆ ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳು ಬಾಲಗರ್ಭಿಣಿಯರಾಗುವುದನ್ನು |

ಪರಿಣಾಮಕಾರಿಯಾಗಿ ತಡೆಗಟ್ಟಲು ವಿವಿಧ ಇಲಾಖೆಗಳಿಗೆ ಜವಾಬ್ದಾರಿಗಳನ್ನು ನಿಗದಿಪಡಿಸಲಾಗಿದೆ.

- ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಸಮಿತಿ ರಚಿಸಲಾಗಿದ್ದು, ಈ ಪ್ರಕರಣಗಳ ಕುರಿತು ಪ್ರತಿ ತ್ರೈಮಾಸಿಕದಲ್ಲಿ ಪರಿಶೀಲನೆ ಮಾಡಲಾಗುತ್ತಿದೆ.

- ಆಕಾಶವಾಣಿಯಲ್ಲಿ ಸರಣಿ ಕಾರ್ಯಕ್ರಮಗಳ ಮೂಲಕ ಜಾಗೃತಿ ಮೂಡಿಸಲಾಗಿದೆ.

- ರಾಜ್ಯಾದ್ಯಂತ ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಶಾಲೆಗಳು, ವಿವಿಧ ಇಲಾಖೆಗಳು ಮತ್ತು ಸಾರ್ವಜನಿಕರಿಗೆ ಹೆಚ್ಚಿನ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಲಕ್ಷಾಂತರ ಭಾಗೀದಾರರು, ಶಾಲಾ ಮಕ್ಕಳನ್ನೊಳಗೊಂಡಂತೆ ಸಾರ್ವಜನಿಕರು ಪ್ರಯೋಜನ ಪಡೆದಿರುತ್ತಾರೆ.

- ಪಾಲನೆ/ ಪೋಷಣೆ ಅವಶ್ಯಕತೆ ಇರುವ ಮಕ್ಕಳ ಸುರಕ್ಷತೆ ಮತ್ತು ಪುನರ್ವಸತಿಗಾಗಿ ಪ್ರತಿ ಜಿಲ್ಲೆಯಲ್ಲೂ ಮಕ್ಕಳ ಕಲ್ಯಾಣ ಸಮಿತಿ, ಮಕ್ಕಳ ವಿಶೇಷ ಪೊಲೀಸ್ ಘಟಕ, ಮಕ್ಕಳ ಪಾಲನಾ ಸಂಸ್ಥೆ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳು ಕಾರ್ಯನಿರ್ವಹಿಸುತ್ತಿವೆ.

- ಸಂತ್ರಸ್ಥ ಮಗುವಿಗೆ ಕಾನೂನು ಸಲಹೆ ಮತ್ತು ಆಪ್ತ ಸಮಾಲೋಚನೆಗಾಗಿ ಪ್ರತಿ ಜಿಲ್ಲೆಯಲ್ಲೂ ಬೆಂಬಲ ವ್ಯಕ್ತಿಗಳನ್ನು ಆಯ್ಕೆಮಾಡಿ ತರಬೇತಿ ನೀಡಲಾಗಿದೆ. (ಪ್ರಸ್ತುತ 173 ಬೆಂಬಲ ವ್ಯಕ್ತಿಗಳು ಕಾರ್ಯನಿರ್ವಹಿಸುತ್ತಿರುತ್ತಾರೆ).

- ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ (NCPCR) ವತಿಯಿಂದ ಕ್ರಮಬದ್ಧ ಕಾರ್ಯ ವಿಧಾನ (SOP) ರಚನೆಯಾಗಿದ್ದು, ಭಾಗೀದಾರ ಇಲಾಖೆಗಳಿಗೆ ಸದರಿ ಕಾರ್ಯವಿಧಾನದಂತೆ ಕಾರ್ಯನಿರ್ವಹಿಸಲು ಈಗಾಗಲೇ ತಿಳಿಸಲಾಗಿದೆ.

- ಮಕ್ಕಳ ಪಾಲನಾ ಕೇಂದ್ರಗಳಲ್ಲಿ ಸಂತ್ರಸ್ಥೆಗೆ 18 ವರ್ಷ ವಯಸ್ಸು ಪೂರ್ತಿಗೊಳ್ಳುವವರೆಗೆ ವಾಸ್ತವ್ಯಕ್ಕೆ ಅವಕಾಶ ಮಾಡಿಕೊಡಲಾಗುವುದು ಹಾಗೂ 23 ವರ್ಷದ ವರೆಗೂ ಅವಶ್ಯಕ ಬೆಂಬಲ ನೀಡಲಾಗುವುದು.

- ಸಂತ್ರಸ್ಥೆಗೆ ಆರೋಗ್ಯ ಸೇವೆ ಮತ್ತು ವೈದ್ಯಕೀಯ ತಪಾಸಣೆಗೆ ಒಂದು ಬಾರಿಗೆ ರೂ.6000/-ಹಾಗೂ ಶಿಕ್ಷಣ ಮುಂದುವರೆಸಲು ಇಚ್ಛಿಸಿದಲ್ಲಿ ಪ್ರಾಯೋಜಕತ್ವ ಯೋಜನೆಯಡಿ ಪ್ರತಿ ತಿಂಗಳಿಗೆ ರೂ.4,000/-ಗಳಂತೆ 18 ವರ್ಷ ಪೂರ್ಣಗೊಳ್ಳುವವರೆಗೂ ಆರ್ಥಿಕ ಸೌಲಭ್ಯ ಒದಗಿಸಲಾಗುವುದು.
- Pradhan Mantri Jan ArogyaYojana (PM-JAY) ಅಡಿಯಲ್ಲಿ ವರ್ಷಕ್ಕೆ ರೂ.5.00 ಲಕ್ಷಗಳ ಆರೋಗ್ಯವಿಮೆಯನ್ನು ಸಂತ್ರಸ್ಥೆಗೆ ಮತ್ತು ಅವಳ ನವಜಾತ ಶಿಶುವಿಗೆ ನೀಡಲಾಗುವುದು.

- ಬಾಲ್ಯವಿವಾಹ ಪ್ರಕರಣಗಳನ್ನು ತಡೆಯುವ ನಿಟ್ಟಿನಲ್ಲಿ ಜಿಲ್ಲಾಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಆಯಾ ತಾಲ್ಲೂಕು ತಹಶೀಲ್ದಾರ್‌ರನ್ನು ಸಮನ್ವಯ ಹಾಗೂ ಪರಿಶೀಲನಾ ಸಮಿತಿ ಅಧ್ಯಕ್ಷರನ್ನಾಗಿ ಸರ್ಕಾರವು ನೇಮಿಸಿದೆ.

| | | |
|---|---|---|
| | | • ಬಾಲಗರ್ಭಿಣಿ ಪ್ರಕರಣಗಳು ಕಂಡು ಬಂದಲ್ಲಿ ನಿಯಮಾನುಸಾರ FIR ದಾಖಲಿಸಿ ಕ್ರಮವಹಿಸಲಾಗುತ್ತಿದೆ.<br><br>• ರಾಜ್ಯದ ಎಲ್ಲಾ ಶಾಲಾ-ಕಾಲೇಜು ವಸತಿ ನಿಲಯ ಹಾಗೂ ತರಬೇತಿ ಸಂಸ್ಥೆಗಳಲ್ಲಿ ಮಕ್ಕಳ ಹಕ್ಕುಗಳು ಬಾಲಗರ್ಭಿಣಿ ಪೋಕ್ಸೋ ಬಾಲ್ಯವಿವಾಹ ಹಾಗೂ ಮಕ್ಕಳ ಸಹಾಯವಾಣಿ-1098 ಮಕ್ಕಳಿಗೆ ಅರಿವು ಜಾಗೃತಿ ಮೂಡಿಸುವ ಕುರಿತು ವಿವಿಧ ಇಲಾಖೆಗಳು ನಿಗಾವಹಿಸಬೇಕಾದ ಆದ್ಯತೆಯ ಅಂಶಗಳ ಕುರಿತು 07 ಇಲಾಖೆಗಳಿಂದ ದಿನಾಂಕ:13.10.2025 ರಂದು ಜಂಟಿ ಸುತ್ತೋಲೆಯನ್ನು ಹೊರಡಿಸಲಾಗಿದೆ.<br><br>• ರಾಜ್ಯದ ಎಲ್ಲಾ ಶಾಲಾ-ಕಾಲೇಜು ವಸತಿ ನಿಲಯ ಹಾಗೂ ತರಬೇತಿ ಸಂಸ್ಥೆಗಳಲ್ಲಿ ಮಕ್ಕಳ ಹಕ್ಕುಗಳು ಬಾಲಗರ್ಭಿಣಿ ಪೋಕ್ಸೋ, ಬಾಲ್ಯವಿವಾಹ ಹಾಗೂ ಮಕ್ಕಳ ಸಹಾಯವಾಣಿ-1098 ಮಕ್ಕಳಿಗೆ ಅರಿವು ಜಾಗೃತಿ ಮೂಡಿಸುವ ಕುರಿತು ವಿವಿಧ ಇಲಾಖೆಗಳು ನಿಗಾವಹಿಸಬೇಕಾದ ಆದ್ಯತೆಯ ಅಂಶಗಳ ಕುರಿತು 07 ಇಲಾಖೆಗಳಿಂದ ದಿನಾಂಕ:13.10.2025 ರಂದು ಜಂಟಿ ಸುತ್ತೋಲೆಯನ್ನು ಹೊರಡಿಸಲಾಗಿದೆ.<br><br>• ಮಕ್ಕಳ ಪಾಲನಾ ಕೇಂದ್ರಗಳಲ್ಲಿ ದಾಖಲಾಗುವ ಬಾಲಗರ್ಭಿಣಿ/ ಬಾಲತಾಯಿ ಮತ್ತು ನವಜಾತ ಶಿಶುವಿಗೆ ಸಂಬಂಧಿಸಿದಂತೆ ಪಾಲಿಸಬೇಕಾದ ಕ್ರಮಬದ್ಧ ಕಾರ್ಯವಿಧಾನ (SOP) ವನ್ನು ದಿನಾಂಕ: 02.09.2025 ರಂದು ಹೊರಡಿಸಲಾಗಿದೆ. |
| ಈ) | ಅಪ್ರಾಪ್ತ ಹೆಣ್ಣು ಮಕ್ಕಳ ಗರ್ಭಧಾರಣೆಗೆ ಕಾರಣಕರ್ತರಾದವರ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮವೇನು? | ಅಪ್ರಾಪ್ತ ಹೆಣ್ಣು ಮಕ್ಕಳ ಗರ್ಭಧಾರಣೆಗೆ ಕಾರಣ ಕರ್ತರಾದವರ ಮೇಲೆ Scheme for Care and Support to Victims under Section 4 & 6 of the Protection of Children from Sexual Offences (POCSO) Act, 2012ರಡಿ FIR ದಾಖಲು ಮಾಡಲಾಗುತ್ತಿದೆ.<br>ಹೆಚ್ಚಿನ ಪೋಕ್ಸೋ ಪ್ರಕರಣಗಳು ಪ್ರೇಮ ಪ್ರಕರಣಗಳಿಂದಾಗಿ ದಾಖಲಾಗುತ್ತಿದ್ದು, ಸಾರ್ವಜನಿಕ ಜೀವನದಲ್ಲಿ ಪೋಷಕರು/ ಸಂತ್ರಸ್ತ ಕುಟುಂಬಸ್ಥರು ತಮ್ಮ ಘನತೆಗೆ ಪ್ರತಿಕೂಲ ಪರಿಣಾಮ ಬೀರುತ್ತದೆ ಎಂದು ಪರಿಭಾವಿಸಿ ಸೂಕ್ತ ರೀತಿಯಲ್ಲಿ ಸ್ಪಂದಿಸದೇ ಇರುವುದರಿಂದ ಆರೋಪಿಗಳಿಗೆ ಶಿಕ್ಷೆಯಾಗದೇ ಖುಲಾಸೆಯಾಗುತ್ತಿದ್ದಾರೆ.<br><br>ಪೋಕ್ಸೋ ಪ್ರಕರಣಗಳಲ್ಲಿ ಶಿಕ್ಷೆಯ ಪ್ರಮಾಣವನ್ನು ಹೆಚ್ಚಿಸಲು ಅನುವಾಗುವಂತೆ ಕಾನೂನು ಇಲಾಖೆಯಿಂದ ಅಗತ್ಯ ಕ್ರಮ ಕೈಗೊಳ್ಳಲು ಕೋರಲಾಗಿದೆ. |

ಮಮಇ 181 ಮಭಾಬ 2025

**(ಲಕ್ಷ್ಮೀ ಆರ್. ಹೆಬ್ಬಾಳ್ಕರ್)**
ಮಹಿಳಾ ಮತ್ತುಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರೀಕರ
ಸಬಲೀಕರಣ ಸಚಿವರು.

| ಕಳೆದ 4 ವರ್ಷಗಳಲ್ಲಿ ದಾಖಲಾದ ಬಾಲಗರ್ಭಿಣಿಯರ ಪ್ರಕರಣಗಳ ಮಾಹಿತಿ | | | | | |
|---|---|---|---|---|---|
| ಕ್ರ. ಸಂ | ಜಿಲ್ಲೆಯ ಹೆಸರು | 2022-23 | 2023-24 | 2024-25 | 2025-26 (ಅಕ್ಟೋಬರ್ ಅಂತ್ಯದವರೆಗೆ) |
| 1 | ಬಾಗಲಕೋಟೆ | 4 | 12 | 12 | 9 |
| 2 | ಬೆಂಗಳೂರು ಕೇಂದ್ರ | 15 | 1 | 3 | 1 |
| 3 | ಬೆಂಗಳೂರು ಉತ್ತರ | 2 | 2 | 2 | 4 |
| 4 | ಬೆಂಗಳೂರು ದಕ್ಷಿಣ | 39 | 52 | 14 | 3 |
| 5 | ಬೆಂಗಳೂರು ಪೂರ್ವ | 0 | 0 | 1 | 6 |
| 6 | ಬೆಂಗಳೂರು ಪಶ್ಚಿಮ | 0 | 0 | 8 | 3 |
| 7 | ಬೆಂಗಳೂರು (ಗ್ರಾ) | 1 | 10 | 17 | 19 |
| 8 | ಬೆಳಗಾವಿ | 9 | 7 | 20 | 28 |
| 9 | ಬಳ್ಳಾರಿ | 5 | 9 | 18 | 8 |
| 10 | ಬೀದರ್ | 3 | 5 | 12 | 2 |
| 11 | ವಿಜಯಪುರ | 2 | 3 | 11 | 24 |
| 12 | ಚಾಮರಾಜನಗರ | 11 | 25 | 35 | 38 |
| 13 | ಚಿಕ್ಕಬಳ್ಳಾಪುರ | 4 | 31 | 32 | 5 |
| 14 | ಚಿಕ್ಕಮಗಳೂರು | 35 | 51 | 40 | 9 |
| 15 | ಚಿತ್ರದುರ್ಗ | 6 | 43 | 30 | 14 |
| 16 | ದಕ್ಷಿಣ ಕನ್ನಡ | 21 | 15 | 20 | 18 |
| 17 | ದಾವಣಗೆರೆ | 7 | 12 | 15 | 9 |
| 18 | ಧಾರವಾಡ | 1 | 1 | 9 | 6 |
| 19 | ಗದಗ | 45 | 19 | 13 | 1 |
| 20 | ಕಲಬುರ್ಗಿ | 0 | 1 | 2 | 15 |
| 21 | ಹಾಸನ | 0 | 3 | 1 | 24 |
| 22 | ಹಾವೇರಿ | 13 | 37 | 58 | 18 |
| 23 | ಕೊಡಗು | 5 | 0 | 43 | 19 |
| 24 | ಕೋಲಾರ | 12 | 61 | 25 | 17 |
| 25 | ಕೊಪ್ಪಳ | 49 | 66 | 5 | 7 |
| 26 | ಮಂಡ್ಯ | 5 | 20 | 8 | 20 |
| 27 | ಮೈಸೂರು | 15 | 14 | 53 | 32 |
| 28 | ರಾಯಚೂರು | 3 | 4 | 6 | 27 |
| 29 | ರಾಮನಗರ | 13 | 24 | 32 | 10 |
| 30 | ಶಿವಮೊಗ್ಗ | 36 | 52 | 55 | 20 |
| 31 | ತುಮಕೂರು | 11 | 35 | 23 | 44 |
| 32 | ಉಡುಪಿ | 21 | 24 | 18 | 22 |
| 33 | ಉತ್ತರ ಕನ್ನಡ | 11 | 17 | 10 | 6 |
| 34 | ಯಾದಗಿರಿ | 1 | 4 | 6 | 8 |
| 35 | ವಿಜಯನಗರ | 0 | 49 | 28 | 25 |
| | **ಒಟ್ಟು** | **405** | **709** | **685** | **521** |